<u>ಅಸಲು ದಾವಾ ಸಂಖ್ಯೆಃ **-151/2015**</u> ಪಿ.ಡಬ್ಲ್ಯೂ**:-3**

ದಿನಾಂಕಃ **04-12-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ನಾನು **3** ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನಾನು ಕೂಲಿ ಕೆಲಸ ಮಾಡುತ್ತೇನೆ. ವಾದಿಯು ಪ್ರತಿವಾದಿಗಳ ವಿರುದ್ಧ ಸೈಟ್ ಗೆ ಸಂಬಂಧಿಸಿದಂತೆ ದಾವೆಯನ್ನು ಸಲ್ಲಿಸಿದ್ದಾರೆ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿ ನಂ.**97** ಅಲ್ಲ ಸರ್ವೇ ನಂ.**35** ರಲ್ಲಿ ಇದೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ಗೊತ್ತು. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲದಿದ್ದರೂ ಸಹ ಗೊತ್ತಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ತಾಯಿ ಪೌತಿ ಆದ ನಂತರ ಪ್ರತಿವಾದಿಗಳಿಗೆ ದಾವಾ ಆಸ್ತಿಯು ಭಾಗಾಂಶದ ಮೂಲಕ ಬಂದಿದೆ ಎಂದರೆ ಸರಿಯಲ್ಲ. ರತ್ನಮ್ಮರವರು ನರಸಿಂಹಪ್ಪರವರಿಂದ ದಾವಾ ಆಸ್ತಿಯನ್ನು ಖರೀದಿ ಮಾಡಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ವಾದಿಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಚಕ್ಕುಬಂಧಿ ಪೂರ್ವಕ್ಕೆ ಖಾಸೀಂ ಸಾಬ್ ಜಮೀನು, ಪಶ್ಚಿಮಕ್ಕೆ ನರಸಿಂಹಸ್ವಾಮಿ ದೇವಸ್ಥಾನ, ಉತ್ತರಕ್ಕೆ ರಾಂಪುರ ರಸ್ತೆ, ದಕ್ಷಿಣಕ್ಕೆ ಉಂಬಳಿ ಜಮೀನು. ಪ್ರತಿವಾದಿಗಳು ಸರ್ವೇ ನಂ.**35** ರ ದಾವಾಆಸ್ತಿಯಲ್ಲಿ ನಿರಂತರವಾಗಿ ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ವಾದಿಗೆ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲದಿದ್ದರೂ ಸಹ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಈ ದಾವೆಯ ಬಗ್ಗೆ ಯಾವುದೇ ವೈಯಕ್ತಿಕ ಮಾಹಿತಿ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.